# ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯ

ಪಂಪ ಮಹಾಕವಿ ರಸ್ತೆ, ಚಾಮರಾಜಪೇಟೆ, ಬೆಂಗಳೂರು–560 018. ದೂರವಾಣಿ: 080–26701303

## ೩೦.೧೦.೨೦೧೨ರಂದು ನಡೆದ ಪ್ರಶಾಸನ ಸಮಿತಿ ೮ನೇ ಸಭೆಯ ನಡಾವಳಿ

ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದ **ಪ್ರಶಾಸನ ಸಮಿತಿಯ ೮ನೇ ಸಭೆಯು** ಮಾನ್ಯ ಕುಲಪತಿಗಳ ಅಧ್ಯಕ್ಷತೆಯಲ್ಲಿ ಅಕ್ಟೋಬರ್ ೩೦, ೨೦೧೨ರ ಮಂಗಳವಾರ ಬೆಳಿಗ್ಗೆ ೧೧.೩೦ ಗಂಟೆಗೆ ನಡೆಯಿತು. ಈ ಸಭೆಯಲ್ಲಿ ಕೆಳಕಂಡ ಮಾನ್ಯ ಸದಸ್ಯರು ಹಾಜರಿದ್ದರು.

**ಹಾಜರಿದ್ದವರು:**

| | | |
|---|---|---|
| ೧. | **ಪ್ರೊ. ಮಲ್ಲೇಪುರಂ ಜಿ. ವೆಂಕಟೇಶ,** ಮಾನ್ಯ ಕುಲಪತಿಗಳು | ಅಧ್ಯಕ್ಷರು |
| ೨. | **ಪಂ. ಜಯತೀರ್ಥಾಚಾರ್ಯ ಮಳಗಿ,** ಧಾರವಾಡ | ಸದಸ್ಯರು |
| ೩. | **ಪ್ರೊ. ಎನ್. ಅಶ್ವತ್ಥಮ್ಮ,** ಮೈಸೂರು | ಸದಸ್ಯರು |
| ೪. | **ಡಾ. ಸಿದ್ಧಲಿಂಗ ಶಿವಾಚಾರ್ಯ ಮಹಾಸ್ವಾಮಿಗಳು,** ಕವಲೇದುರ್ಗ | ಸದಸ್ಯರು |
| ೫. | **ಡಾ. ಪಿ.ಬಿ. ಸಂತಪ್ಪನವರ,** ಗುಲಬರ್ಗಾ | ಸದಸ್ಯರು |
| ೬. | **ಶ್ರೀ ಜಿ. ಹನುಮಂತರಾಯಪ್ಪ,** ತುಮಕೂರು | ಸದಸ್ಯರು |
| ೭. | **ಡಾ. ಟಿ.ಎಸ್. ಸತ್ಯವತಿ,** ಬೆಂಗಳೂರು | ಸದಸ್ಯರು |
| ೮. | **ಡಾ. ಎಸ್.ಆರ್. ಲೀಲಾ,** ಬೆಂಗಳೂರು | ಸದಸ್ಯರು |
| ೯. | **ಡಾ. ಶ್ರೀನಿವಾಸ ವರಖೇಡಿ,** ಡೀನ್, ಭಾಷಾ ನಿಕಾಯ | ಸದಸ್ಯರು |
| ೧೦. | **ಪ್ರೊ. ವೈ.ಎಸ್. ಸಿದ್ದೇಗೌಡ,** ಕುಲಸಚಿವರು | ಸದಸ್ಯ ಕಾರ್ಯದರ್ಶಿ |

**ಗೈರುಹಾಜರಿ:**

| | | |
|---|---|---|
| ೧. | **ಸರ್ಕಾರದ ಕಾರ್ಯದರ್ಶಿಗಳು,** ಉನ್ನತ ಶಿಕ್ಷಣ ಇಲಾಖೆ, ಬೆಂಗಳೂರು | ಸದಸ್ಯರು |
| ೨. | **ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು,** ಹಣಕಾಸು ಇಲಾಖೆ, ಬೆಂಗಳೂರು | ಸದಸ್ಯರು |
| ೩. | **ಸರ್ಕಾರದ ಕಾರ್ಯದರ್ಶಿಗಳು,** ಕಂದಾಯ ಇಲಾಖೆ, (ಧಾರ್ಮಿಕ ದತ್ತಿ ವಿಭಾಗ), ಬೆಂಗಳೂರು | ಸದಸ್ಯರು |
| ೪. | **ನಿರ್ದೇಶಕರು,** ಪ್ರಾಚ್ಯವಸ್ತು ಮತ್ತು ಸಂಗ್ರಹಾಲಯ ನಿರ್ದೇಶನಾಲಯ, ಬೆಂಗಳೂರು | ಸದಸ್ಯರು |
| ೫. | **ಆಯುಕ್ತರು,** ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು | ಸದಸ್ಯರು |
| ೬. | **ಪ್ರಾದೇಶಿಕ ನಿರ್ದೇಶಕರು,** ಯುಜಿಸಿ–ನೈರುತ್ಯ ಪ್ರಾದೇಶಿಕ ಕೇಂದ್ರ, ಬೆಂಗಳೂರು | ಸದಸ್ಯರು |
| ೭. | **ಡಾ. ಎಚ್.ಆರ್. ವಿಶ್ವಾಸ್,** ಮಂಗಳೂರು | ಸದಸ್ಯರು |
| ೮. | **ಶ್ರೀ ಡಿ. ಸುರೇಂದ್ರಕುಮಾರ್,** ಬೆಂಗಳೂರು | ಸದಸ್ಯರು |

ಸಭೆಯ ಪ್ರಾರಂಭಕ್ಕೆ ಮಾನ್ಯ ಕುಲಪತಿಗಳು ಎಲ್ಲ ಗೌರವಾನ್ವಿತ ಸದಸ್ಯರನ್ನು ಸ್ವಾಗತಿಸಿದರು. ಸಭೆಯಲ್ಲಿ ಕೆಳಕಂಡ ಕಾರ್ಯಸೂಚಿಗಳು ಮಂಡಿತವಾಗಿ ನಿರ್ಣಯಗೊಂಡವು.

### ವಿಷಯ 1: ಪ್ರಶಾಸನ ಸಮಿತಿ ಏಳನೇ ಸಭೆಯ ಅನುಪಾಲನಾ ವರದಿ.

ಟಿಪ್ಪಣಿ: ದಿನಾಂಕ: 26.09.2012ರಂದು ನಡೆದ ಪ್ರಶಾಸನ ಸಮಿತಿ ಏಳನೇ ಸಭೆಯಲ್ಲಿ ಮಂಡಿತವಾದ ವಿಷಯಗಳನ್ನು ಕುರಿತು ನಿರ್ಣಯಿಸಿದಂತೆ ಕ್ರಮಕೈಗೊಳ್ಳಲಾದ ಅನುಪಾಲನಾ ವರದಿ.

**ವಿಷಯ ಸಂಖ್ಯೆ 4**ಕ್ಕೆ ಸಂಬಂಧಿಸಿದಂತೆ ಉಪ ಕುಲಸಚಿವ, ಸಹಾಯಕ ನಿರ್ದೇಶಕರು, ವಾಹನ ಚಾಲಕರು ಮತ್ತು ಅಡುಗೆ ಸಹಾಯಕ ಹುದ್ದೆಗಳಿಗೆ ನೇಮಕಾತಿಯನ್ನು ಮಾಡಿಕೊಳ್ಳಲಾಗಿದ್ದು, ಕರ್ತವ್ಯಕ್ಕೆ ಹಾಜರಾಗಿರುತ್ತಾರೆ. **ವಿಷಯ ಸಂಖ್ಯೆ 7**ಕ್ಕೆ ಸಂಬಂಧಿಸಿದಂತೆ ಕ್ರಮವಹಿಸಲಾಗುತ್ತಿದೆ. **ವಿಷಯ ಸಂಖ್ಯೆ 8**ಕ್ಕೆ ಸಂಬಂಧಿಸಿದಂತೆ ಹಣಕಾಸು ಸಮಿತಿ ಸಭೆಯ ಮುಂದೆ ವಿಷಯವನ್ನು ಮಂಡಿಸಲು ಕ್ರಮಕೈಗೊಳ್ಳಲಾಗಿದೆ.

ನಿರ್ಣಯ: **ಅನುಪಾಲನಾ ವರದಿಗೆ ಸಭೆಯು ತನ್ನ ಅನುಮೋದನೆಯನ್ನು ನೀಡಿತು.**

### ವಿಷಯ 2: ದಿನಾಂಕ: 17.10.2012ರಂದು ನಡೆದ 'ಪ್ರಶಿಕ್ಷಣ ಪರಿಷತ್ತು' ಐದನೇ ಸಭೆ ನಡಾವಳಿಯ ಅನುಮೋದನೆ ಬಗೆಗೆ.

ಟಿಪ್ಪಣಿ: ಪ್ರಶಿಕ್ಷಣ ಪರಿಷತ್ತಿನ ಐದನೇ ಸಭೆಯು ದಿನಾಂಕ: 17.10.2012ರಂದು ಮಾನ್ಯ ಕುಲಪತಿಗಳ ಅಧ್ಯಕ್ಷತೆಯಲ್ಲಿ ನಡೆಯಿತು. ಈ ಸಭೆಯ ನಡಾವಳಿಯನ್ನು ಅನುಮೋದನೆಗಾಗಿ ಮಂಡಿಸಿದೆ.

ನಿರ್ಣಯ: **ಪ್ರಶಿಕ್ಷಣ ಪರಿಷತ್ತಿನ ಐದನೇ ಸಭೆಯ ನಡಾವಳಿಗೆ ಸಭೆಯು ತನ್ನ ಅನುಮೋದನೆಯನ್ನು ನೀಡಿತು.**

**ವಿಷಯ 3: ರಾಜ್ಯ ವೇತನಶ್ರೇಣಿಯ ಬೋಧಕೇತರ ಹುದ್ದೆಗಳ ಅನುಮೋದನೆಯ ಬಗೆಗೆ.**

ಟಿಪ್ಪಣಿ: ದಿನಾಂಕ: 31.08.2012ರಂದು ನಡೆದ ಪ್ರಶಾಸನ ಸಮಿತಿ ಆರನೇ ಸಭೆಯ ನಿರ್ಣಯದಂತೆ 'ಎ', 'ಬಿ' ಮತ್ತು 'ಸಿ' ವರ್ಗದ ಹುದ್ದೆಗಳಿಗೆ ಒಟ್ಟು 25 ಅಂಕಗಳನ್ನು ಹಾಗೂ 'ಡಿ' ವರ್ಗದ ಹುದ್ದೆಗೆ 10 ಅಂಕಗಳನ್ನು ನಿರ್ದಿಷ್ಟೀಕರಿಸಿಕೊಂಡು ದಿನಾಂಕ: 11.10.2012ರಂದು ರಾಜ್ಯ ವೇತನಶ್ರೇಣಿಯ ಬೋಧಕೇತರ ಹುದ್ದೆಗಳಾದ **ಸಹಾಯಕ ಮತ್ತು ಕಿರಿಯ ಸಹಾಯಕ** ಹುದ್ದೆಗಳ ನೇಮಕಾತಿಗಾಗಿ ಸಂದರ್ಶನವನ್ನು ನಡೆಸಲಾಯಿತು. ಅಂತೆಯೇ, ದಿನಾಂಕ: 27.10.2012ರಂದು **ಶಾಖಾಧಿಕಾರಿ** ಹುದ್ದೆಯ ನೇಮಕಾತಿಗಾಗಿ ಸಂದರ್ಶನವನ್ನು ನಡೆಸಲಾಯಿತು. ಈ ಸಂದರ್ಶನದಲ್ಲಿ ಆಯ್ಕೆಯಾದ ಅಭ್ಯರ್ಥಿಗಳನ್ನು ನೇಮಕ ಮಾಡಿಕೊಳ್ಳಲು ಅನುಮೋದನೆಗಾಗಿ ಮಂಡಿಸಿದೆ.

ನಿರ್ಣಯ: **ರಾಜ್ಯ ವೇತನಶ್ರೇಣಿಯ ಬೋಧಕೇತರ ಹುದ್ದೆಗಳಿಗೆ ದಿನಾಂಕ: 11.10.2012 ಮತ್ತು 27.10.2012ರಂದು ನಡೆದ 'ಆಯ್ಕೆ ಸಮಿತಿ' ಸಭೆಯ ಶಿಫಾರಸ್ಸುಗಳನ್ನು ಸಂಪೂರ್ಣವಾಗಿ ಪರಿಶೀಲಿಸಿತು. ಆಯಾಯ ಹುದ್ದೆಗಳಿಗೆ ಬೇಕಾಗುವ ಸೇವಾ ಅನುಭವ, ಜ್ಯೇಷ್ಠತೆ ಮತ್ತು ಶೈಕ್ಷಣಿಕ ಅರ್ಹತೆಯನ್ನು ಕ್ರಮಾನುಸಾರವಾಗಿ ಪರಿಗಣಿಸಿ ಆಯ್ಕೆಗೊಂಡಿರುವ ಅಭ್ಯರ್ಥಿಗಳಿಗೆ ಸಭೆಯು ತನ್ನ ಅನುಮೋದನೆಯನ್ನು ನೀಡಿತು.**

| ಕ್ರ.ಸಂ. | ಹುದ್ದೆಯ ಪದನಾಮ | ಮೀಸಲಾತಿ | ಆಯ್ಕೆಗೊಂಡ ಅಭ್ಯರ್ಥಿಗಳು |
|---|---|---|---|
| 01. | ಶಾಖಾಧಿಕಾರಿ | ಮೀಸಲುರಹಿತ ಹುದ್ದೆ | **ವಿದ್ವಾನ್ ಎಂ. ಶಿವಮೂರ್ತಿ**<br>ಮನೆ ನಂ. 846, ಶ್ರೀ ಮರುಳಸಿದ್ದೇಶ್ವರ ಸದನ<br>8ನೇ ಕ್ರಾಸ್, ಜನತಾ ನಗರ, ಟಿ.ಕೆ. ಲೇಔಟ್<br>ಮೈಸೂರು – 570 023 |
| 02. | ಸಹಾಯಕರು | ಪರಿಶಿಷ್ಟ ಜಾತಿ | **ಶ್ರೀ ಲೋಕೇಶ ವಿ.ಹೆಚ್**<br>S/o. ಹನುಮಂತಯ್ಯ,<br>ರಮಾನಂದನಗರ – 571811, ಜಿ. ನಾಗತಿಹಳ್ಳಿ ಅಂಚೆ,<br>ನಾಗಮಂಗಲ ತಾ॥, ಮಂಡ್ಯ ಜಿಲ್ಲೆ. |
| 03. | ಕಿರಿಯ ಸಹಾಯಕರು | ಪರಿಶಿಷ್ಟ ಜಾತಿ | **ಶ್ರೀ ಸುರೇಶ ಎಸ್.ಟಿ.**<br>ಬಿನ್ ತಿಮ್ಮಪ್ಪ<br>ಶ್ರೀರಾಂಪುರ ಗ್ರಾಮ, ಕಸಬಾ ಹೋಬಳಿ<br>ಕಡೂರು ಹಳ್ಳಿ ಅಂಚೆ, ಕಡೂರು ತಾಲ್ಲೂಕು,<br>ಚಿಕ್ಕಮಂಗಳೂರು ಜಿಲ್ಲೆ |
| | | ಸಾಮಾನ್ಯ | **ಶ್ರೀ ಗಣೇಶ್ ಎಂ.**<br>ಬಿನ್ ಮುತ್ತಯ್ಯ<br>ನಂ: ಬಿ 23/1, ಜನತಾ ಕಾಲೋನಿ<br>2ನೇ ಅಡ್ಡರಸ್ತೆ, ಮೈಸೂರು ರಸ್ತೆ<br>ಬೆಂಗಳೂರು–560026. |

**ಮೇಲ್ಕಂಡ ಆಯಾಯ ಹುದ್ದೆಗಳಿಗೆ ನೇಮಕಾತಿ ಹೊಂದಿರುವವರು ನೇಮಕಾತಿ ಆದೇಶ ಹೊರಡಿಸಿದ ಒಂದು ವಾರದ ಒಳಗೆ ಕರ್ತವ್ಯಕ್ಕೆ ಹಾಜರಾಗಲು ಸಭೆಯು ಸೂಚಿಸಿತು.**

**ವಿಷಯ 4: ಪ್ರಾಧ್ಯಾಪಕರು, ಸಹಪ್ರಾಧ್ಯಾಪಕರು, ಸಹಾಯಕ ಪ್ರಾಧ್ಯಾಪಕರು ಮತ್ತು ಗ್ರಂಥಪಾಲಕರ ಸಂದರ್ಶನಕ್ಕೆ ಸಂಬಂಧಿಸಿದ ಪರಿನಿಯಮ ಅನುಮೋದನೆ ಬಗೆಗೆ.**

ಟಿಪ್ಪಣಿ: ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯಕ್ಕೆ ಪ್ರಾಧ್ಯಾಪಕರು, ಸಹಪ್ರಾಧ್ಯಾಪಕರು, ಸಹಾಯಕ ಪ್ರಾಧ್ಯಾಪಕರು, ಗ್ರಂಥಪಾಲಕರು, ಉಪ ಗ್ರಂಥಪಾಲಕರು ಮತ್ತು ಸಹಾಯಕ ಗ್ರಂಥಪಾಲಕರ ನೇಮಕಾತಿಗೆ ಸಂಬಂಧಿಸಿದಂತೆ ಸಂದರ್ಶನ ನಿಯಮಾವಳಿಯನ್ನು ಸಿದ್ಧಪಡಿಸಲಾಗಿದ್ದು, ಈ ಪರಿನಿಯಮವನ್ನು ಅನುಮೋದನೆಗಾಗಿ ಸಭೆಯ ಮುಂದೆ ಇರಿಸಿದೆ.

ನಿರ್ಣಯ: **ಪರಿನಿಯಮವನ್ನು ಪರಿಶೀಲಿಸಿ ಸಭೆಯು ತನ್ನ ಅನುಮೋದನೆಯನ್ನು ನೀಡಿತು.**

**ವಿಷಯ 5: 2013–14ನೇ ಸಾಲಿನಿಂದ ಆರಂಭಿಸಲು ತೀರ್ಮಾನಿಸಿರುವ ಸಂಸ್ಕೃತ ದೂರಶಿಕ್ಷಣ ತರಗತಿಗಳನ್ನು ಆರಂಭಿಸಲು ಸಿದ್ಧಪಡಿಸಿದ ಪರಿನಿಯಮವನ್ನು ಒಪ್ಪಿಸುವ ಬಗೆಗೆ.**

ಟಿಪ್ಪಣಿ: ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯವು ರಾಜ್ಯದ IGNOU/KSOU ಮಾದರಿಯಲ್ಲಿ ಎಲ್ಲಾ ಸಂಸ್ಕೃತಾಭಿಮಾನಿಗಳಿಗೆ ಲಭ್ಯವಾಗುವಂತೆ ದೂರ–ಬಾಹ್ಯ–ಮುಕ್ತ ಅನೌಪಚಾರಿಕ ಶಿಕ್ಷಣ ಕಾರ್ಯಕ್ರಮಗಳನ್ನು 2013–14ನೇ ಸಾಲಿನಿಂದ ಆರಂಭಿಸಲು ಉದ್ದೇಶಿಸಿದೆ. ಈ ಶಿಕ್ಷಣಕ್ಕೆ ಸಂಬಂಧಿಸಿದಂತೆ ದೂರಶಿಕ್ಷಣ ಪರಿನಿಯಮಗಳನ್ನು ಸಿದ್ಧಪಡಿಸಿ, ಸಭೆಯ ಅವಗಾಹನೆಗಾಗಿ ಒಪ್ಪಿಸಿದೆ.

ನಿರ್ಣಯ: **ಪರಿನಿಯಮವನ್ನು ಪರಿಶೀಲಿಸಿ ಸಭೆಯು ತನ್ನ ಅನುಮೋದನೆಯನ್ನು ನೀಡಿ, ಕೂಡಲೇ ಸರ್ಕಾರಕ್ಕೆ ಸಲ್ಲಿಸುವಂತೆ ಸೂಚಿಸಿತು.**

**ವಿಷಯ 6: ಉಪ ಕುಲಸಚಿವರ ಮೊಬೈಲ್ ಬಿಲ್ಲನ್ನು ಪಾವತಿಸಲು ಅನುಮೋದನೆ ನೀಡುವ ಬಗೆಗೆ.**

ಟಿಪ್ಪಣಿ: ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದ ಉಪ ಕುಲಸಚಿವ ಹುದ್ದೆಗೆ ಶ್ರೀ ಪಾಗೋಜಿ ಪ್ರಕಾಶ ರುದ್ರಪ್ಪ –ಇವರು ನೇಮಕಗೊಂಡು ಕಾರ್ಯನಿರ್ವಹಿಸುತ್ತಿದ್ದಾರೆ. ಇವರು ಕಛೇರಿ ಕೆಲಸಗಳಿಗಾಗಿ ಬಳಸುವ ಮೊಬೈಲ್ **(9448590679)**ನ ಪ್ರತಿ ತಿಂಗಳ ವೆಚ್ಚದ ಬಿಲ್ಲನ್ನು ವಿಶ್ವವಿದ್ಯಾಲಯದಿಂದ ಪಾವತಿಸಲು ಕ್ರಮಕೈಗೊಳ್ಳಲಾಗಿದ್ದು, ಅನುಮೋದನೆಗಾಗಿ ಸಭೆಯ ಮುಂದೆ ಮಂಡಿಸಿದೆ.

ನಿರ್ಣಯ: **ವಿಶ್ವವಿದ್ಯಾಲಯವು ಹೊಸದಾಗಿ ಆರಂಭಗೊಂಡಿರುವುದರಿಂದ ಕುಲಪತಿ ಹಾಗೂ ಕುಲಸಚಿವರ ನಡುವೆ ವಿಶ್ವವಿದ್ಯಾಲಯದ ಕಾರ್ಯನಿಮಿತ್ತ ಉಪಕುಲಸಚಿವರಿಗೆ ದೂರವಾಣಿ ಅಗತ್ಯವಿರುವುದನ್ನು ಸಭೆಗೆ ಕುಲಪತಿಗಳು ವಿವರಿಸಿದರು. ವಿಶ್ವವಿದ್ಯಾಲಯದ ಕಾರ್ಯಭಾರಗಳ ಹಿನ್ನೆಲೆಯಲ್ಲಿ ಮುಂದಿನ ಆದೇಶದವರೆಗೂ ರೂ. 600/–ಗಳನ್ನು ಮೀರದಂತೆ ಉಪಕುಲಸಚಿವರ ಚಲದೂರವಾಣಿ ಬಳಕೆಗೆ ಸಭೆಯು ತನ್ನ ಅನುಮೋದನೆಯನ್ನು ನೀಡಿತು.**

**ಪ್ರೊ. ವೈ.ಎಸ್. ಸಿದ್ದೇಗೌಡ**
ಸದಸ್ಯ ಕಾರ್ಯದರ್ಶಿ

**ಪ್ರೊ. ಮಲ್ಲೇಪುರಂ ಜಿ. ವೆಂಕಟೇಶ**
ಅಧ್ಯಕ್ಷರು